Akashvani: Bangalore
National Bulletin In Kannada
25.06.2026: 13.10hrs
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
25.06.2026: 13.10hrs
********

**ಮುಖ್ಯಾಂಶಗಳು :**

1. ವೆನೆಜುವೆಲಾದಲ್ಲಿ ೬.೫ ತೀವ್ರತೆಯ ಪ್ರಬಲ ಭೂಕಂಪ : ತುರ್ತು ಪರಿಸ್ಥಿತಿ ಘೋಷಣೆ - ಉಪರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರಿಂದ ಸಂತಾಪ
2. ಕರ್ನಾಟಕದಲ್ಲಿಂದು ತುಂಗಭದ್ರಾ ಅಣೆಕಟ್ಟೆಯ ೩೩ ಕ್ರಸ್ಟ್‌ಗೇಟ್‌ಗಳ ಲೋಕಾರ್ಪಣೆ
3. ರಾಮ ಜನ್ಮಭೂಮಿ ಟ್ರಸ್ಟ್ ದೇಣಿಗೆಗಳ ನಿರ್ವಹಣೆ ಕುರಿತು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಿರಾಕರಿಸಿದ ಸುಪ್ರೀಂ ಕೋರ್ಟ್
4. ಮಾದಕ ದ್ರವ್ಯ ಮಾರಾಟ ಹಾಗೂ ಬಳಕೆ ತಡೆಗಟ್ಟುವ ನಿಟ್ಟಿನಲ್ಲಿ - ಕೇಂದ್ರ ಗೃಹ ಸಚಿವ ಅಮಿತ್ ಶಾ ನೇತೃತ್ವದಲ್ಲಿ ನಾಳೆ ಉನ್ನತ ಮಟ್ಟದ ಸಭೆ

**********

ರಿಕ್ಟರ್ ಮಾಪಕದಲ್ಲಿ ೬.೨ ಮತ್ತು ೬.೫ ತೀವ್ರತೆಯ ಭೂಕಂಪಗಳಿಂದಾಗಿ ವೆನೆಜುವೆಲಾದ ಕ್ಯಾರಕಾಸ್ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಇಂದು ಬೆಳಿಗ್ಗೆ ಹಲವಾರು ಕಟ್ಟಡಗಳು ಕುಸಿದು ಬಿದ್ದ ನಂತರ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ದೇಶದಲ್ಲಿ ತುರ್ತು ಪರಿಸ್ಥಿತಿ ಘೋಷಿಸಿದ್ದಾರೆ. ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ ಅವರು, ಮುಂದಿನ ಸೂಚನೆ ಬರುವವರೆಗೆ ವಿದ್ಯಾರ್ಥಿಗಳಿಗೆ ತರಗತಿಗಳು ಮತ್ತು ಅನಿವಾರ್ಯವಲ್ಲದ ಚಟುವಟಿಕೆಗಳನ್ನು ಸ್ಥಗಿತಗೊಳಿಸುವುದಾಗಿ ಘೋಷಿಸಿದ್ದಾರೆ. ಹೆಚ್ಚು ಪೀಡಿತ ಪ್ರದೇಶಗಳಲ್ಲಿ ಸಾರ್ವಜನಿಕ ಮತ್ತು ಖಾಸಗಿ ಆರೋಗ್ಯ ಜಾಲವನ್ನು ಸಕ್ರಿಯಗೊಳಿಸಿದ್ದಾರೆ. ಈ ನಡುವೆ ಪ್ರಬಲ ಭೂಕಂಪದ ನಂತರ ಹಲವಾರು ಸ್ಥಳಗಳಲ್ಲಿ ರಕ್ಷಣಾ ಕಾರ್ಯಾಚರಣೆಗಳು ಪ್ರಗತಿಯಲ್ಲಿವೆ. ಇದಕ್ಕೂ ಮೊದಲು, ಇಂದು ಬೆಳಿಗ್ಗೆ ಯಾರಾಕುಯ್ ರಾಜ್ಯದ ಯುಮಾರೆ ಪಟ್ಟಣದಲ್ಲಿ ೬.೫ ತೀವ್ರತೆಯ ಪ್ರಬಲ ಭೂಕಂಪ ಸಂಭವಿಸಿದೆ. ಅಮೇರಿಕ ಭೂವೈಜ್ಞಾನಿಕ ಸಮೀಕ್ಷೆಯ ಪ್ರಕಾರ, ಈ ಭೂಕಂಪವು ಎರಡು ಬಾರಿ ಸಂಭವಿಸಿದ ಎರಡನೇ ಘಟನೆಯಾಗಿದೆ. ಇದಕ್ಕೂ ಮೊದಲು, ೬.೨ ತೀವ್ರತೆಯ ಭೂಕಂಪವು ವೆನೆಜುವೆಲಾದ ಸ್ಯಾನ್ ಫೆಲಿಪೆಯನ್ನು ಅಪ್ಪಳಿಸಿತು, ಇದು ಎರಡು ಬಾರಿ ಸಂಭವಿಸಿದ ಮೊದಲ ಘಟನೆಯಾಗಿದೆ. ೬.೨ ತೀವ್ರತೆಯ ಈ ಭೂಕಂಪದ ನಂತರ ಕೇವಲ ೩೯ ಸೆಕೆಂಡುಗಳ ನಂತರ ೬.೫ ತೀವ್ರತೆಯ ಮತ್ತೊಂದು ದೊಡ್ಡ ಭೂಕಂಪ ಸಂಭವಿಸಿತು. ವೆನೆಜುವೆಲಾದ ಪ್ರದೇಶದ ಹೆಚ್ಚಿನ ಭಾಗದಲ್ಲಿ ಭೂಕಂಪದ ತೀವ್ರತೆ ಹೆಚ್ಚಾಗಿದ್ದು, ದಕ್ಷಿಣ ಅಮೆರಿಕಾದ ನಾಗರಿಕ ರಕ್ಷಣಾ ವ್ಯವಸ್ಥೆಗಳಲ್ಲಿ ಎಚ್ಚರಿಕೆ ನೀಡಲಾಗಿದೆ.ಈ ನಡುವೆ ಸರಣಿ ಪ್ರಬಲ ಭೂಕಂಪಗಳ ಪರಿಣಾಮವಾಗಿ ೩೨ ಜನರು ಸಾವನ್ನಪ್ಪಿದ್ದಾರೆ ಮತ್ತು ೬೦೦ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ತಿಳಿಸಿದ್ದಾರೆ. ವೆನೆಜುವೆಲಾದಲ್ಲಿ ಸಂಭವಿಸಿದ ಭೀಕರ ಭೂಕಂಪಗಳಿಂದ ಉಂಟಾದ ಹಾನಿಯ ಬಗ್ಗೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಮಾಧ್ಯಮದ ಪೋಸ್ಟ್‌ನಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು, ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡವರಿಗೆ ಮತ್ತು ಸಂಕಷ್ಟಕ್ಕೆ ಸಿಲುಕಿರುವ ಅಸಂಖ್ಯಾತ ಕುಟುಂಬಗಳಿಗೆ ಬೆಂಬಲವಿದೆ ಎಂದು ಹೇಳಿದ್ದಾರೆ. ವೆನೆಜುವೆಲಾದ ಜನತೆಗೆ ಸಹಾನುಭೂತಿ ಮತ್ತು ಒಗ್ಗಟ್ಟನ್ನು ವ್ಯಕ್ತಪಡಿಸುವಲ್ಲಿ ತಾವು ಕೈಜೋಡಿಸುವುದಾಗಿ ಉಪರಾಷ್ಟ್ರಪತಿಯವರು ತಿಳಿಸಿದ್ದಾರೆ. ವೆನೆಜುವೆಲಾದಲ್ಲಿ ಸಂಭವಿಸಿದ ಭೀಕರ ಭೂಕಂಪದಿಂದ ಉಂಟಾದ ವಿನಾಶದ ಬಗ್ಗೆ

ಪ್ರಧಾನಿ ನರೇಂದ್ರ ಮೋದಿ ಅವರು ದುಃಖ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಅವರು ವೆನೆಜುವೆಲಾ ಸರ್ಕಾರ ಮತ್ತು ಜನರಿಗೆ, ವಿಶೇಷವಾಗಿ ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ. ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಬೇಕೆಂದು ಅವರು ಪ್ರಾರ್ಥಿಸಿದ್ದಾರೆ. ಭಾರತವು ಬಾಧಿತ ಎಲ್ಲರೊಂದಿಗೆ ಒಗ್ಗಟ್ಟಿನಿಂದ ನಿಲ್ಲುತ್ತದೆ ಮತ್ತು ಸಾಧ್ಯವಿರುವ ಎಲ್ಲ ಸಹಾಯವನ್ನು ನೀಡುವುದಾಗಿ ಭರವಸೆ ನೀಡಿದೆ ಎಂದು ಅವರು ಹೇಳಿದರು.

**********

ಕರ್ನಾಟಕದ ಕೊಪ್ಪಳ ಜಿಲ್ಲೆ ಇಂದು ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಯಿತು. ೫೧ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗಿರುವ ತುಂಗಭದ್ರಾ ಅಣೆಕಟ್ಟೆಯ ನೂತನ ಕ್ರಸ್ಟ್ ಗೇಟ್ ಸಂಖ್ಯೆ ೧೭,೧೮,೧೯ ಮತ್ತು ೨೦ಕ್ಕೆ ಪೂಜೆ ಸಲ್ಲಿಸುವ ಮುಖಾಂತರ ಕಾರ್ಯಕ್ರಮ ಜರುಗಿತು. ಕೇಂದ್ರ ಜಲಸಂಪನ್ಮೂಲ ಸಚಿವ ಸಿ.ಆರ್.ಪಾಟೀಲ್, ಕ್ರಸ್ಟ್ ಗೇಟ್‌ಗಳನ್ನು ಲೋಕಾರ್ಪಣೆಗೊಳಿಸಿದರು. ಕರ್ನಾಟಕದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು, ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ ಸೇರಿದಂತೆ ರಾಜ್ಯಸರ್ಕಾರದ ಸಚಿವರು ಮತ್ತು ಶಾಸಕರು ಕಾರ್ಯಕ್ರಮ ದಲ್ಲಿ ಉಪಸ್ಥಿತರಿದ್ದರು. ೨೦೨೪ರ ಡಿಸೆಂಬರ್‌ನಲ್ಲಿ ಜಲಾಶಯದ ೧೯ನೇ ಕ್ರಸ್ಟ್‌ಗೇಟ್ ಕೊಚ್ಚಿ ಹೋಗುವ ಮೂಲಕ ಲಕ್ಷಾಂತರ ಕ್ಯೂಸೆಕ್ ನೀರು ನದಿಗೆ ಹರಿದು ಹೋಗಿತ್ತು. ಈ ಹಿನ್ನೆಲೆಯಲ್ಲಿ ಭವಿಷ್ಯದ ದೃಷ್ಟಿಯಿಂದ ರಾಜ್ಯ ಸರ್ಕಾರ ೫೧ ಕೋಟಿ ರೂಪಾಯಿ ವೆಚ್ಚದಲ್ಲಿ ಅತ್ಯಾಧುನಿಕ ತಂತ್ರಜ್ಞಾನದೊಂದಿಗೆ ನೂತನ ೩೩ ಕ್ರಸ್ಟ್‌ಗೇಟ್‌ಗಳನ್ನು ಅಳವಡಿಸಿದೆ.

**********

ಶ್ರೀ ರಾಮ ಜನ್ಮಭೂಮಿ ಟ್ರಸ್ಟ್‌ಗೆ ಬಂದಿರುವ ದೇಣಿಗೆಗಳ ನಿರ್ವಹಣೆಯ ಕುರಿತು ನ್ಯಾಯಾಲಯದ ಉಸ್ತುವಾರಿಯಲ್ಲಿ ತನಿಖೆ ನಡೆಸಬೇಕೆಂದು ಕೋರಿ ಸಲ್ಲಿಕೆಯಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ತುರ್ತು ವಿಚಾರಣೆಯನ್ನು ಸುಪ್ರೀಂ ಕೋರ್ಟ್ ಇಂದು ನಿರಾಕರಿಸಿದೆ. ಆದಾಗ್ಯೂ, ಈ ವಿಷಯವನ್ನು ಮುಂದಿನ ದಿನಗಳಲ್ಲಿ ವಿಚಾರಣೆಗೆ ಪಟ್ಟಿ ಮಾಡಲಾಗುವುದು ಎಂದು ನ್ಯಾಯಾಲಯವು ಅರ್ಜಿದಾರರಿಗೆ ಭರವಸೆ ನೀಡಿದೆ. ಅರ್ಜಿದಾರರಾಗಿ ಸ್ವತಃ ಹಾಜರಾಗಿದ್ದ ವಕೀಲ ನರೇಂದ್ರ ಕುಮಾರ್ ಗೋಸ್ವಾಮಿ ಅವರು, ನ್ಯಾಯಮೂರ್ತಿಗಳಾದ ಬಿ.ವಿ. ನಾಗರತ್ನ ಮತ್ತು ಜಾಯ್‌ಮಲ್ಯ ಬಾಗ್ಚಿ ಅವರ ಪೀಠದ ಮುಂದೆ, ಪ್ರಮುಖ ಸಾಕ್ಷ್ಯಗಳ ರಕ್ಷಣೆಯನ್ನು ಖಚಿತಪಡಿಸಿಕೊಳ್ಳಲು ತುರ್ತು ವಿಚಾರಣೆಗೆ ಪಟ್ಟಿ ಮಾಡುವುದಷ್ಟೇ ತಮ್ಮ ತಕ್ಷಣದ ಪ್ರಾರ್ಥನೆಯಾಗಿದೆ ಎಂದು ವಾದಿಸಿದರು. ಅಯೋಧ್ಯೆಯ ರಾಮ ಮಂದಿರದಲ್ಲಿ ಬಂದಿರುವ ದೇಣಿಗೆ ಮತ್ತು ಕಾಣಿಕೆಗಳಿಗೆ ಸಂಬಂಧಿಸಿದ ಸಿಸಿಟಿವಿ ದೃಶ್ಯಾವಳಿಗಳು, ಡಿಜಿಟಲ್ ಪಾವತಿ ದಾಖಲೆಗಳು ಮತ್ತು ಇತರ ಸಾಕ್ಷ್ಯಗಳನ್ನು ಸಂರಕ್ಷಿಸಬೇಕೆಂದು ಈ ಅರ್ಜಿಯಲ್ಲಿ ಕೋರಲಾಗಿದೆ. ಅಲ್ಲದೆ, ಟ್ರಸ್ಟ್‌ಗೆ ಬಂದಿರುವ ದೇಣಿಗೆಗಳ ವಿಧಿವಿಜ್ಞಾನ ಆಡಿಟ್ ನಡೆಸಬೇಕು ಮತ್ತು ಮಂದಿರದ ನಿಧಿ ನಿರ್ವಹಣೆಯಲ್ಲಿ ಹೆಚ್ಚಿನ ಪಾರದರ್ಶಕತೆ ತರಬೇಕು ಎಂದೂ ಇದರಲ್ಲಿ ಒತ್ತಾಯಿಸಲಾಗಿದೆ.

**********

ಮಾದಕ ದ್ರವ್ಯ ಮಾರಾಟ ಹಾಗೂ ಬಳಕೆ ತಡೆಗಟ್ಟುವ ಪ್ರಯತ್ನಗಳನ್ನು ಬಲಪಡಿಸುವ ಉದ್ದೇಶದಿಂದ ಕೇಂದ್ರ ಗೃಹ ಸಚಿವ ಅಮಿತ್ ಶಾ ನೇತೃತ್ವದಲ್ಲಿ ನಾಳೆ ನವದೆಹಲಿಯಲ್ಲಿ ಉನ್ನತ ಮಟ್ಟದ ಸಭೆ ನಡೆಯಲಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರ ಮತ್ತು ಮಾದಕ ವಸ್ತು ಮಾರಾಟ ತಡೆಗಟ್ಟುವಲ್ಲಿ ಕಾರ್ಯನಿರ್ವಹಿಸುತ್ತಿರುವ ಏಜೆನ್ಸಿಗಳ ಪ್ರತಿನಿಧಿಗಳು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಗೃಹ ಸಚಿವಾಲಯ ತಿಳಿಸಿದೆ. ಈ ಸಂದರ್ಭದಲ್ಲಿ ಅಮಿತ್ ಶಾ ಅವರು ಮಾದಕ ದ್ರವ್ಯ ನಿಯಂತ್ರಣ ಉಪಕ್ರಮ ಪತ್ರ ೨೦೨೬-೨೦೨೯'ನ್ನು ಬಿಡುಗಡೆ ಮಾಡಲಿದ್ದಾರೆ.

**********

ಗ್ರಾಮೀಣಾಭಿವೃದ್ಧಿ ಇಲಾಖೆಯು ಇಂದು ನವದೆಹಲಿಯಲ್ಲಿ ಗ್ರಾಮೀಣಾಭಿವೃದ್ಧಿಯಲ್ಲಿ ಕೃತಕಬುದ್ಧಿಮತ್ತೆಯನ್ನು ಬಳಸಿಕೊಳ್ಳುವ ಕುರಿತು ರಾಷ್ಟ್ರೀಯ ಕಾರ್ಯಾಗಾರವನ್ನು ಆಯೋಜಿಸಲಿದೆ. ಗ್ರಾಮೀಣ ಭಾರತದ ತಳಮಟ್ಟದ ಅಭಿವೃದ್ಧಿ ಅಗತ್ಯಗಳೊಂದಿಗೆ ಅತ್ಯಾಧುನಿಕ ತಾಂತ್ರಿಕ ಆವಿಷ್ಕಾರಗಳನ್ನು ಕಾರ್ಯಗತಗೊಳಿಸಲು ನಡೆಯುವ ಈ ಕಾರ್ಯಕ್ರಮವು ಸಹಯೋಗದ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವಾಲಯ ತಿಳಿಸಿದೆ. ಕಾರ್ಯಾಗಾರದಿಂದ ಹೊರಹೊಮ್ಮುವ ಸಾಮೂಹಿಕ ಒಳನೋಟಗಳು ಭಾರತದ ಗ್ರಾಮೀಣಾಭಿವೃದ್ಧಿ ಪರಿಸರ ವ್ಯವಸ್ಥೆಯಲ್ಲಿ ಸುರಕ್ಷಿತ, ದೃಢವಾದ ಮತ್ತು ಪ್ರಭಾವಶಾಲಿ ಕೃತಕಬುದ್ಧಿಮತ್ತೆಯ ಪರಿಕರಗಳನ್ನು ಸಂಯೋಜಿಸಲು ನೀತಿ ಮಾರ್ಗಸೂಚಿಯನ್ನು ರೂಪಿಸಲು ಕೊಡುಗೆ ನೀಡುವ ನಿರೀಕ್ಷೆಯಿದೆ. ಗ್ರಾಮೀಣಾಭಿವೃದ್ಧಿ ಫಲಿತಾಂಶಗಳನ್ನು ವೇಗಗೊಳಿಸುವಲ್ಲಿ ಕೃತಕ ಬುದ್ಧಿಮತ್ತೆಯ ಪರಿವರ್ತನಾ ಸಾಮರ್ಥ್ಯದ ಕುರಿತು ಚರ್ಚಿಸಲು ನೀತಿ ಆಯೋಗ, ಇಂಡಿಯಾ ಎಐ ಮಿಷನ್, ಪ್ರಮುಖ ಉದ್ಯಮ ಸಲಹಾ ಸಂಸ್ಥೆಗಳು, ತಂತ್ರಜ್ಞಾನ ನವೋದ್ಯಮಗಳು, ಶೈಕ್ಷಣಿಕ ಮತ್ತು ಜ್ಞಾನ ಪಾಲುದಾರರು ಸೇರಿದಂತೆ ಪ್ರಮುಖ ಪಾಲುದಾರರನ್ನು ಕಾರ್ಯಾಗಾರವು ಒಟ್ಟುಗೂಡಿಸುತ್ತದೆ.

**********

ಉತ್ತರ ಪ್ರದೇಶದ ವಾರಾಣಸಿಯ ಲಾಲ್ ಬಹದ್ದೂರ್ ಶಾಸ್ತ್ರಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಮೊದಲ ಈಸಿ ಕನೆಕ್ಟ್ ವಿಮಾನ ಹಾರಾಟಕ್ಕೆ ನಾಗರಿಕ ವಿಮಾನಯಾನ ಸಚಿವ ಕೆ.ರಾಮಮೋಹನ್ ನಾಯ್ಡು ಇಂದು ಚಾಲನೆ ನೀಡಿದ್ದಾರೆ. ದೆಹಲಿ ಮೂಲಕ ವಾರಣಾಸಿಯನ್ನು ಜಗತ್ತಿಗೆ ಸಂಪರ್ಕಿಸುವ ಮೊದಲ ಹಬ್ ಮತ್ತು ಸ್ಪೋಕ್ ವಿಮಾನವು ಭಾರತವನ್ನು ಜಗತ್ತಿನೊಂದಿಗೆ ಸಂಪರ್ಕಿಸುವ ಗುರಿಯನ್ನು ಹೊಂದಿದೆ. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಹೊಸ ಹಬ್ ಮತ್ತು ಸ್ಪೋಕ್ ಮಾದರಿಯು ನಾಗರಿಕರು ಹೇಗೆ ಪ್ರಯಾಣದ ಅನುಕೂಲತೆಯನ್ನು ಹೊಂದಲಿದ್ದಾರೆ ಎಂಬುದರಲ್ಲಿ ಮಹತ್ವದ ಬದಲಾವಣೆಗೆ ದಾರಿ ಮಾಡಿಕೊಡುತ್ತದೆ ಎಂದು ಹೇಳಿದರು.

**********

ಫಿಫಾ ವಿಶ್ವಕಪ್ ಫುಟ್ಬಾಲ್‌ನಲ್ಲಿ, ಇಂದು ಬೆಳಿಗ್ಗೆ ಅಟ್ಲಾಂಟಾದಲ್ಲಿ ನಡೆದ ಗ್ರೂಪ್ ಸಿ ಪಂದ್ಯದಲ್ಲಿ ಮೊರಾಕೊ, ಹೈಟಿಯನ್ನು ೪-೨ ಗೋಲುಗಳಿಂದ ಸೋಲಿಸಿ, ನಾಕೌಟ್ ಸುತ್ತಿಗೆ ಪ್ರವೇಶಿಸಿದೆ. ಈ ಸೋಲಿನಿಂದಾಗಿ, ಹೈಟಿ ಟೂರ್ನಿಯಿಂದ ನಿರ್ಗಮಿಸಿದೆ. ಮೊರಾಕೊದ ಅಚ್ರಾಫ್ ಹಕಿಮಿ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.ಇಂದು ಮುಂಜಾನೆ, ವ್ಯಾಂಕೋವರ್‌ನಲ್ಲಿ ನಡೆದ ಗ್ರೂಪ್ ಬಿ ಪಂದ್ಯದಲ್ಲಿ, ರುಬೆನ್ ವರ್ಗಾಸ್ ಮತ್ತು ಜೋಹಾನ್ ಮಂಜಾಂಬಿ ಗೋಲು ಗಳಿಸುವ ಮೂಲಕ, ಸ್ವಿಟ್ಜರ್ಲೆಂಡ್, ಕೆನಡಾ ವಿರುದ್ಧ ೨-೧ ಅಂತರದ ಗೆಲುವು ಸಾಧಿಸಿತು. ಈ ಫಲಿತಾಂಶದೊಂದಿಗೆ, ಸ್ವಿಟ್ಜರ್ಲೆಂಡ್ ೭ ಅಂಕಗಳೊಂದಿಗೆ ಗ್ರೂಪ್ ಬಿ ಯಲ್ಲಿ ಅಗ್ರಸ್ಥಾನ ಪಡೆದು, ೩೨ ರ ಸುತ್ತಿಗೆ ತಲುಪಿತು, ಆದರೆ ಕೆನಡಾ ೩ ಪಂದ್ಯಗಳಿಂದ ೪ ಅಂಕಗಳೊಂದಿಗೆ, ಮೊದಲ ಬಾರಿಗೆ ನಾಕೌಟ್ ಹಂತವನ್ನು ತಲುಪಿತು.

******END****